# ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:-** ಧಾರವಾಡ ಜಿಲ್ಲೆ, ಕುಂದಗೊಳ ತಾಲ್ಲೂಕು, ಅಕ್ಕಮಹಾದೇವಿ ಪ್ರಸಾದ ನಿಲಯ, ಗುಡಗೇರಿ, ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದ ಮಾನ್ಯತೆಯನ್ನು ರದ್ದುಪಡಿಸುವ ಬಗ್ಗೆ.

**ಓದಲಾಗಿದೆ:-** ಆಯುಕ್ತರು,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕಕಡತ ಸಂಖ್ಯೆ:BCWD-12029/6/2022/BCWD-HOSTEL-BCWD.

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಧಾರವಾಡ ಜಿಲ್ಲೆ, ಕುಂದಗೊಳ ತಾಲ್ಲೂಕು, ಅಕ್ಕಮಹಾದೇವಿ ಪ್ರಸಾದ ನಿಲಯ, ಗುಡಗೇರಿ, ಖಾಸಗಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ 2016-17 ನೇ ಸಾಲಿನಲ್ಲಿ ಒಟ್ಟು 25 ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸಲಾಗಿದ್ದು ಅದರಂತೆ ಇಲಾಖೆಯಿಂದ ಅನುದಾನ ಬಿಡುಗಡೆಯಾಗಿರುತ್ತದೆ ಆದರೆ 2017-18ನೇ ಸಾಲಿನಿಂದ ಈವರೆಗೂ ಪ್ರವೇಶಾತಿ ಕೋರಿ ಯಾವುದೇ ಅರ್ಜಿಗಳು ಸ್ವೀಕೃತವಾಗದ ಕಾರಣ, ಸದರಿ ಸಂಸ್ಥೆಯವರು 2017-18 ರಿಂದ ಇಲ್ಲಿಯವರೆಗೂ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಿರುವುದಿಲ್ಲ ಹಾಗೂ 2017-18ನೇ ಸಾಲಿನಿಂದ ಸದರಿ ವಿದ್ಯಾರ್ಥಿನಿಲಯಕ್ಕೆ ಯಾವುದೇ ರೀತಿಯ ಅನುದಾನ ಇಲಾಖೆಯಿಂದ ಬಿಡುಗಡೆಯಾಗಿರುವುದಿಲ್ಲವಾಗಿ ತಿಳಿಸಿ ಅಕ್ಕಮಹಾದೇವಿ ಉಚಿತ ಪ್ರಸಾದ ನಿಲಯ, ಗುಡಗೇರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದ ಮಾನ್ಯತೆಯನ್ನು ರದ್ದುಪಡಿಸುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಹಿಂವಕ 418 ಬಿಎಂಎಸ್ 2022, ಬೆಂಗಳೂರು, ದಿನಾಂಕ: 15-07-2022

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಧಾರವಾಡ ಜಿಲ್ಲೆ, ಕುಂದಗೊಳ ತಾಲ್ಲೂಕು, ಅಕ್ಕಮಹಾದೇವಿ ಪ್ರಸಾದ ನಿಲಯ, ಗುಡಗೇರಿ, ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ 2017-18ನೇ ಸಾಲಿನಿಂದ ಸತತವಾಗಿ ಯಾವುದೇ ಅರ್ಜಿಗಳು ಬಾರದೇ ಸ್ಥಗಿತಗೊಂಡಿರುವುದರಿಂದ ಸದರಿ ವಿದ್ಯಾರ್ಥಿನಿಲಯಕ್ಕೆ ನೀಡಿದ್ದ ಮಾನ್ಯತೆಯನ್ನು ರದ್ದುಪಡಿಸಿ ಆದೇಶಿಸಿದೆ.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಸಹಮತಿಯೊಂದಿಗೆ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 15/07/2022

(ಶಾಹೀನ್ ಪರ್ವೀನ್ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಎ&ಇ) (ಲೆಕ್ಕಪರಿಶೋಧನೆ-1&2) ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ,ಧಾರವಾಡ.
5. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಧಾರವಾಡ ಜಿಲ್ಲೆ
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಧಾರವಾಡ ಜಿಲ್ಲೆ

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**************